ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE :

# ಕೊರೊನಾ ನಿಯಂತ್ರಣ; ರಾಜ್ಯಪಾಲರ ಮಧ್ಯಪ್ರವೇಶ

## ಇಂದು ವಾಲಾ ನೇತೃತ್ವದಲ್ಲಿ ಉಭಯ ಸದನಗಳ ನಾಯಕರ ಸಭೆ; ಅಚ್ಚರಿ ಮೂಡಿಸಿದ ನಡೆ

ಬೆಂಗಳೂರು: ರಾಜ್ಯದಲ್ಲಿ ಕೊರೊನಾ ಎರಡನೇ ಅಲೆ ಜೋರಾಗುತ್ತಿರುವ ಹಿನ್ನೆಲೆಯಲ್ಲಿ ರಾಜ್ಯಪಾಲರೇ ಮಧ್ಯಪ್ರವೇಶಿಸಿದ್ದು ಉಭಯ ಸದನಗಳ ನಾಯಕರ ಸಭೆ ಕರೆದಿದ್ದಾರೆ. ಅದರಂತೆ, ರಾಜ್ಯಪಾಲ ವಜುಭಾಯಿ ವಾಲಾ ಅಧ್ಯಕ್ಷತೆಯಲ್ಲಿ ಮಂಗಳವಾರ ಸದನ ನಾಯಕರ ವರ್ಚುವಲ್ ಸಭೆ ನಡೆಯಲಿದೆ. ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ, ವಿಧಾನಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಸೇರಿದಂತೆ ಉಭಯ ಸದನಗಳ ನಾಯಕರಿಗೆ ಸಭೆಯಲ್ಲಿ ಪಾಲ್ಗೊಳ್ಳುವಂತೆ ರಾಜಭವನದ ಮೂಲಕ ಮನವಿ ಮಾಡಿಕೊಳ್ಳಲಾಗಿದೆ. ಸಿಎಂ ಬಿ.ಎಸ್.ಯಡಿಯೂರಪ್ಪ ಅವರು ಕೊರೊನಾ ಸೋಂಕಿನಿಂದಾಗಿ ಮಣಿಪಾಲ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವುದರಿಂದ ಅವರು ಅಲ್ಲಿಂದಲೇ ಈ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಮುಖ್ಯಮಂತ್ರಿಗಳ ಕಚೇರಿ ತಿಳಿಸಿದೆ.

> ಸರ್ವಪಕ್ಷ ಸಭೆಗೆ ರಾಜ್ಯಪಾಲರ ಕಚೇರಿಯಿಂದ ಆಹ್ವಾನ ಬಂದಿದ್ದು, ರಾಜ್ಯದಲ್ಲಿ ರಾಜ್ಯಪಾಲರ ಆಳ್ವಿಕೆ ಬಂದಂತೆ ಕಾಣುತ್ತಿದೆ. ಇದೇ ಮೊದಲ ಬಾರಿಗೆ ರಾಜ್ಯಪಾಲರು ಇಂಥ ಕ್ರಮ ತೆಗೆದುಕೊಂಡಿದ್ದು, ಮುಂದಿನ ದಿನಗಳಲ್ಲಿ ಅವರದ್ದೇ ಆಳ್ವಿಕೆ ಅಧಿಕೃತವಾಗಿ ಜಾರಿಯಾಗುವ ಲಕ್ಷಣಗಳು ಗೋಚರಿಸುತ್ತಿವೆ.
>
> • ಡಿ.ಕೆ.ಶಿವಕುಮಾರ್, ಕೆಪಿಸಿಸಿ ಅಧ್ಯಕ್ಷ



ಸೋಮವಾರ ಸಿಎಂ ನೇತೃತ್ವದಲ್ಲಿ ಬೆಂಗಳೂರಿನ ಶಾಸಕರು ಹಾಗೂ ಸಂಸದರ ಸಭೆ ನಡೆಯಿತು.

## ಬೆಂಗಳೂರಿಗೆ ಟಫ್ ರೂಲ್ಸ್: ಇಂದು ಘೋಷಣೆ

ರಾಜಧಾನಿ ಬೆಂಗಳೂರಿನಲ್ಲಿ ಕೊರೊನಾ ಪ್ರಕರಣಗಳ ಹೆಚ್ಚಳ ಹಿನ್ನೆಲೆಯಲ್ಲಿ ಲಾಕ್‌ಡೌನ್ ಹೊರತುಪಡಿಸಿ ಕಠಿಣ
ನಿಯಮ ಜಾರಿಗೊಳಿಸಲು ಸರ್ಕಾರ ತೀರ್ಮಾನಿಸಿದೆ. ಬೆಂಗಳೂರಿಗಾಗಿಯೇ ಪ್ರತ್ಯೇಕ ನಿಯಮಾವಳಿ ರೂಪಿಸು
ವುದು ಹಾಗೂ ರಾತ್ರಿ ಕರ್ಫ್ಯೂವನ್ನು 8 ಗಂಟೆಯಿಂದಲೇ ಜಾರಿಗೊಳಿಸುವ ಸಾಧ್ಯತೆಯೂ ಇದೆ. ಹೋಟೆಲ್, ಪಬ್,
ಬಾರ್ ಅಂಡ್ ರೆಸ್ಟೋರೆಂಟ್, ಚಿತ್ರಮಂದಿರ, ಮಾರುಕಟ್ಟೆ ಹಾಗೂ ಮಾಲ್‌ಗಳ ವಿಚಾರದಲ್ಲಿ ಕೆಲವೊಂದು ಬಿಗಿ
ನಿಯಮ ಜಾರಿಗೊಳಿಸುವ ಬಗ್ಗೆ ಗಂಭೀರ ಚಿಂತನೆ ನಡೆಸಿದೆ. ವಿಧಾನಸೌಧ ಸಮ್ಮೇಳನ ಸಭಾಂಗಣದಲ್ಲಿ
ಸೋಮವಾರ ನಡೆದ ನಗರದ ಶಾಸಕರು ಹಾಗೂ ಸಂಸದರ ಸಭೆಯಲ್ಲಿ ಲಾಕ್‌ಡೌನ್ ಅಥವಾ ವೀಕೆಂಡ್ ಲಾಕ್
ಡೌನ್ ಬೇಡ ಎಂಬ ಅಭಿಪ್ರಾಯ ಪಕ್ಷಾತೀತವಾಗಿ ವ್ಯಕ್ತವಾಗಿದೆ.